ಶ್ರೀ ಬಿ. ಸೋಮಶೇಖರ್: ಈ ಕುರಿತು ಸಾಕಷ್ಟು ಟೀಕೆ-ಟಿಪ್ಪಣಿಗಳು ಮತ್ತು ನ್ಯಾಯಾಲಯಗಳಿಂದ ಅನೇಕ ಬಾರಿ ಛೀಮಾರಿಗಳಾಗಿದೆ. ನೀವು ತರುತ್ತಿರುವ ಮಸೂದೆ ಬಹಳ ಒಳ್ಳೆಯದೆಂದು ನೀವು ಆತ್ಮ ಮುಟ್ಟಿಕೊಂಡು ಹೇಳುತ್ತೀರಾ? ದಯವಿಟ್ಟು ವಿತ್‌ಡ್ರಾ ಮಾಡಿಕೊಳ್ಳುವುದು ಒಳ್ಳೆಯದು. ಇದನ್ನು ಚರ್ಚೆಗೆ ತೆಗೆದುಕೊಳ್ಳುವುದು ಬೇಡ. Kindly withdraw it is in your own interest and in the interest of the Govt. ಇದರಿಂದ ಸರ್ಕಾರಕ್ಕೂ embarrassment ಆಗುವುದು ಬೇಡ. ದಯವಿಟ್ಟು ತರುತ್ತಿರುವ ಈ ವಿಧೇಯಕವನ್ನು ವಿತ್‌ಡ್ರಾ ಮಾಡುವುದು ಒಳ್ಳೆಯದು.

ಶ್ರೀ ಜಗದೀಶ್ ಶೆಟ್ಟರ್: ವಿಧೇಯಕ ಕುರಿತಂತೆ ನಾಳೆ ಚರ್ಚೆಗೆ ತೆಗೆದುಕೊಳ್ಳೋಣ. ಈಗ ನಿಯಮ 69ರಡಿ ಬರಗಾಲ ಮತ್ತು ಕುಡಿಯುವ ನೀರಿನ ಸಮಸ್ಯೆ ಕುರಿತಂತೆ ಚರ್ಚೆ ಮುಂದುವರಿಸಬೇಕು.

ಉಪಾಧ್ಯಕ್ಷರು: ಆಗಬಹುದು. 2002ನೇ ಸಾಲಿನ ಕರ್ನಾಟಕ ಪೌರನಿಗಮಗಳ (ಎರಡನೇ ತಿದ್ದುಪಡಿ) ವಿಧೇಯಕದ ಮೇಲಿನ ಚರ್ಚೆಯನ್ನು ನಾಳೆ ತೆಗೆದುಕೊಳ್ಳೋಣ.

(ಈ) ಕರ್ನಾಟಕ ಪಂಚಾಯತ್ ರಾಜ್(ತಿದ್ದುಪಡಿ) ವಿಧೇಯಕ, 2002

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು): ಮಾನ್ಯ ಉಪಾಧ್ಯಕ್ಷರೇ "2002 ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ"

ಶ್ರೀ ಜಗದೀಶ್ ಶೆಟ್ಟರ್: ಈ ವಿಧೇಯಕವನ್ನು ಜಂಟಿ ಸದನ ಸಮಿತಿಯ ಪರಿಶೀಲನೆಗೆ ಒಪ್ಪಿಸಬೇಕು.

ಶ್ರೀ ಎಂ.ವೈ. ಘೋರ್ಪಡೆ : ಈ ವಿಧೇಯಕವನ್ನು ಕಳೆದ ವರ್ಷ ಇಂಟ್ರಡ್ಯೂಸ್ ಮಾಡಲಾಗಿತ್ತು. ಇದರ ಬಗ್ಗೆ ಚರ್ಚೆ ಮಾಡದೆ ಜಂಟಿ ಸದನ ಸಮಿತಿಯ ಪರಿಶೀಲನೆಗೆ ರೆಫರ್ ಮಾಡುವುದಕ್ಕೆ ನಾನು ಒಪ್ಪಿದ್ದೇನೆ. ಈ ಪ್ರಸ್ತಾವವನ್ನು ಸದನದ ಅನುಮೋದನೆಗಾಗಿ ಮಂಡಿಸುತ್ತಿದ್ದೇನೆ.

ಶ್ರೀ ಜಗದೀಶ್ ಶೆಟ್ಟರ್: ಆಗಬಹುದು.

ಪರ್ಯಾಲೋಚನ ಪ್ರಸ್ತಾವ

"2002ನೇ ಸಾಲಿನ ಕರ್ನಾಟಕ ಪಂಚಾಯತರಾಜ್ (ತಿದ್ದುಪಡಿ) ವಿಧೇಯಕವನ್ನು ಜಂಟಿ ಸದನ ಸಮಿತಿಗೆ ಪರಿಶೀಲನೆಗಾಗಿ ಒಪ್ಪಿಸಲು ಈ ಸದನವು ತೀರ್ಮಾನಿಸುತ್ತದೆ."

ಪ್ರಸ್ತಾವ ಮಂಡಿಸಲ್ಪಟ್ಟಿತು

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ

"2002ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಜಂಟಿ ಸದನ ಸಮಿತಿಗೆ ಪರಿಶೀಲನೆಗಾಗಿ ಒಪ್ಪಿಸಲು ಈ ಸದನವು ತೀರ್ಮಾನಿಸುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಹಾಗೂ 2002ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಜಂಟಿ ಸದನ ಸಮಿತಿಗೆ ಪರಿಶೀಲನೆಗಾಗಿ ಒಪ್ಪಿಸಲಾಯಿತು.

2002ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಜಂಟಿ ಸದನ ಸಮಿತಿಯ ಪರಿಶೀಲನೆಗಾಗಿ ಒಪ್ಪಿಸಲಾಯಿತು.